ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. ಕಾರಣವೇನೆಂದರೆ, ರಾಜ್ಯದಲ್ಲಿ ಹಾಲಿ 637 ಪಶುವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇದ್ದು, ಪಶು ವೈದ್ಯ ಪದವೀಧರರ ಕೊರತೆಯಿಂದ ಹೊಸದಾಗಿ ಪಶುವೈದ್ಯ ಸಂಸ್ಥೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಸರ್ಕಾರವು ಪ್ರಸ್ತುತ ಪರಿಗಣಿಸುತ್ತಿರುವುದಿಲ್ಲ.

ಈ) ರಾಜ್ಯದ ಪ್ರತಿ ಜಿಲ್ಲೆಗೆ ಒಂದರಂತೆ ಪಶುವೈದ್ಯಕೀಯ ಪಾಲಿಕ್ಲಿನಿಕ್ ಸ್ಥಾಪಿಸಲು ಉದ್ದೇಶಿಸಿದ್ದು, ಅದರಂತೆ ಬೆಳಗಾವಿ ನಗರದಲ್ಲಿ ಒಂದು ಪಾಲಿಕ್ಲಿನಿಕ್ ಕಾರ್ಯನಿರ್ವಹಿಸುತ್ತಿದ್ದು, ಹೀಗಾಗಿ ರಾಯಭಾಗ ತಾಲ್ಲೂಕಿನಲ್ಲಿ ಪಾಲಿಕ್ಲಿನಿಕ್ ಸ್ಥಾಪನೆಯ ಪ್ರಸ್ತಾವನೆ ಮುಂದಿರುವುದಿಲ್ಲ. ಆದಕಾರಣ ಸಿಬ್ಬಂದಿ ನೇಮಕ ಮಾಡುವ ಪ್ರಮೇಯ ಉದ್ಭವಿಸುವುದಿಲ್ಲ.

ಉ) ರಾಜ್ಯದಲ್ಲಿ ಹಾಲಿ 637 ಪಶುವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇದ್ದು, ಪಶುವೈದ್ಯ ಪದವೀಧರರ ಕೊರತೆಯಿಂದ ರಾಜ್ಯದಲ್ಲಿ ಹೊಸದಾಗಿ ಪಶುವೈದ್ಯ ಸಂಸ್ಥೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಸರ್ಕಾರವು ಪ್ರಸ್ತುತ ಪರಿಗಣಿಸುತ್ತಿರುವುದಿಲ್ಲ.

ಪ್ರಥಮ ದರ್ಜೆ ಕಾಲೇಜು ಮಂಜೂರಾತಿ

311 (551) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಿಜಯಪುರ, ವಿಶ್ವನಾಥಪುರ, ಕುಂದಾಣಕ್ಕೆ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

ಆ) ಪ್ರಥಮ ದರ್ಜೆ ಕಾಲೇಜುಗಳ ಮಂಜೂರಾತಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು ; ಯಾವಾಗ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

ಅ) ಇದೆ.

ಆ) ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆಯನುಸಾರ ಪ್ರಥಮ ದರ್ಜೆ ಕಾಲೇಜುಗಳ ಮಂಜೂರಾತಿಗಾಗಿ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು. ಹೊಸದಾಗಿ ಪ್ರಾರಂಭಿಸಲಾದ ಸರ್ಕಾರಿ ಪ್ರಥಮ

ದರ್ಜೆ ಕಾಲೇಜುಗಳಿಗೆ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತಿದ್ದು ನಂತರ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು. ಇದಕ್ಕೆ ಕಾಲಮಿತಿಯನ್ನು ನಿಗದಿಪಡಿಸಿರುವುದಿಲ್ಲ.

ಆರಾಧನಾ ಯೋಜನೆ

283 (710) ಶ್ರೀ ರುದ್ರೇಶ್‌ಗೌಡ ವೈ.ಎನ್. (**ಬೇಲೂರು**) :– ಮಾನ್ಯ ಮುಜರಾಯಿ ಹಾಗೂ ಬಂದರು, ಒಳನಾಡು ಜಲಸಾರಿಗೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಆರಾಧನಾ ಯೋಜನೆಯಡಿಯಲ್ಲಿ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

ಅ) ಅನುದಾನವು ಪ್ರತಿ ವರ್ಷ ಕಡಿಮೆಯಾಗುತ್ತಿರುವುದರಿಂದ ರಾಜ್ಯದಲ್ಲಿ ಶಿಥಿಲವಾಗಿರುವ ದೇವಸ್ಥಾನಗಳ ಅಭಿವೃದ್ಧಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಮಾನ್ಯ ಮುಜರಾಯಿ ಹಾಗೂ ಬಂದರು, ಒಳನಾಡು ಜಲಸಾರಿಗೆ ಸಚಿವರು):–

ಅ)

ಕ್ರ.ಸಂ.	ವರ್ಷ	(ರೂ. ಲಕ್ಷಗಳಲ್ಲಿ)
1	2009–10	200.00
2	2010–11	160.00
3	2011–12	837.20

ಆ ಸಂಬಂಧದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಇಲ್ಲ. ಉದ್ಭವಿಸುವುದಿಲ್ಲ.